# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 480

ಸದಸ್ಯರ ಹೆಸರು : ಶ್ರೀ ಪ್ರಕಾಶ್.ಕೆ.ರಾಥೋಡ್
(ನಾಮ ನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 24.09.2020

ಉತ್ತರಿಸಬೇಕಾದ ಸಚಿವರು : ಮಾನ್ಯ ಮುಖ್ಯಮಂತ್ರಿರವರು

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದಲ್ಲಿ ವಾಹನ ದಟ್ಟಣೆ ಕಡಿಮೆಗೊಳಿಸಲು ಪ್ರಾರಂಭಿಸಿರುವ ಪೆರಿಫೆರಲ್ ರಿಂಗ್ ರಸ್ತೆ ಹಾಗೂ ಎಲಿವೇಟೆಡ್ ಕಾಮಗಾರಿಗಳು ಯಾವ ಹಂತದಲ್ಲಿದೆ: (ವಿವರ ನೀಡುವುದು) | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಪೆರಿಫೆರಲ್ ರಿಂಗ್ ರಸ್ತೆ ನಿರ್ಮಾಣಕ್ಕೆ ಭೂಸ್ವಾಧೀನಪಡಿಸಿಕೊಳ್ಳುವ ಪ್ರಕ್ರಿಯೆ ಜಾರಿಯಲ್ಲಿರುತ್ತದೆ. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಯಾವುದೇ ಎಲಿವೇಟೆಡ್ ಯೋಜನೆಯನ್ನು ಕೈಗೆತ್ತಿಕೊಂಡಿರುವುದಿಲ್ಲ. |
| ಆ) | ಪೆರಿಫೆರಲ್ ರಿಂಗ್ ರಸ್ತೆ ಹಾಗೂ ಎಲಿವೇಟೆಡ್ ರಸ್ತೆಯ ಯೋಜನೆಯ ಅಂದಾಜು ವೆಚ್ಚ ಎಷ್ಟು? | ಪೆರಿಫೆರಲ್ ರಿಂಗ್ ರಸ್ತೆ ಯೋಜನೆಯ ನಿರ್ಮಾಣದ ಅಂದಾಜು ಮೊತ್ತ ರೂ.5,616.42 ಕೋಟಿಗಳಾಗಿವೆ. ಸದರಿ ಯೋಜನೆಗಾಗಿ ಅಧಿಸೂಚಿತ ಜಮೀನುಗಳನ್ನು ಭೂಸ್ವಾಧೀನಪಡಿಸಿಕೊಳ್ಳಲು ಭೂ ಪರಿಹಾರ ದರವನ್ನು ನಿಗಧಿಪಡಿಸಬೇಕಾಗಿರುತ್ತದೆ. |
| ಇ) | ಯಾವ ಯಾವ ಪ್ರದೇಶಗಳಲ್ಲಿ ಎಷ್ಟು; ಕಿ.ಮೀ ರಸ್ತೆ ನಿರ್ಮಾಣ ಮಾಡಲಾಗುವುದು; ಯೋಜನೆ ಯಾವಾಗ ಪೂರ್ಣಗೊಳ್ಳುವುದು? (ವಿವರ ನೀಡುವುದು) | ಪೆರಿಫೆರಲ್ ರಿಂಗ್ ರಸ್ತೆ ಭಾಗ-1 ನ್ನು ತುಮಕೂರು ರಸ್ತೆಯಿಂದ ಬಳ್ಳಾರಿ ರಸ್ತೆ, ಮದ್ರಾಸ್ ರಸ್ತೆ ಮೂಲಕ ಹೊಸೂರು ರಸ್ತೆ ಸೇರುತ್ತದೆ. ಸದರಿ ರಸ್ತೆಯ ಒಟ್ಟು ಉದ್ದ 65.5 ಕಿ.ಮೀ ಗಳು. ರಾಷ್ಟ್ರೀಯ ಹಸಿರು ನ್ಯಾಯಮಂಡಳಿಯಿಂದ ಪರಿಸರ ತೀರುವಳಿ ಪಡೆದ ನಂತರ ಯೋಜನೆಯ ಕಾಮಗಾರಿ ಕೈಗೆತ್ತಿಕೊಳ್ಳಲಾಗುವುದು. |
| ಈ) | ಹೆಬ್ಬಾಳದಿಂದ ಬೆಂಗಳೂರು ಗಾಲ್ಫ್ ಕ್ಲಬ್ ರಸ್ತೆ ಮೇಲ್ಸೇತುವೆ ನಿರ್ಮಾಣ ಮಾಡುವ ಬಗ್ಗೆ ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ? (ವಿವರ ನೀಡುವುದು) | - ಇಲ್ಲ - |

ಸಂಖ್ಯೆ: ನಅಇ 58 ಬೆಂಭೂಸ್ವಾ 2020

ಬಿ.ಎಸ್. ಯಡಿಯೂರಪ್ಪ

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ